2. ವಿಷಯ: ಮಹಿಳಾ ವಿಶ್ವವಿದ್ಯಾಲಯದಲ್ಲಿ ಬೋಧಕೇತರ ಸಿಬ್ಬಂದಿಯನ್ನು ನೇಮಿಸುವ ಬಗ್ಗೆ.

ಶ್ರೀ ಹೆಚ್.ಆರ್. ಅಲಗೂರು (ನಾಗಠಾಣ):– ಮಾನ್ಯ ಅಧ್ಯಕ್ಷರೆ, ರಾಜ್ಯ ಮಹಿಳಾ ವಿಶ್ವವಿದ್ಯಾಲಯದಲ್ಲಿ ವಿಶ್ವವಿದ್ಯಾಲಯದ ಅಧಿನಿಯಮ 2000ರ ಪ್ರಕರಣ 56ರ ಅಡಿಯಲ್ಲಿ 1016 ಜನ ಬೋಧಕೇತರ ಸಿಬ್ಬಂದಿಯನ್ನು ನೇಮಿಸಿರುವ ಬಗ್ಗೆ ಮಾನ್ಯ ಸಚಿವರ ಗಮನ ಸೆಳೆಯುತ್ತೇನೆ.

ಶ್ರೀ ಟಿ.ಬಿ. ಜಯಚಂದ್ರ (ಮಾನ್ಯ ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು, ಮಾನ್ಯ ಕನ್ನಡ ಮತ್ತು ಸಂಸ್ಕೃತಿ ಸಚಿವರ ಪರವಾಗಿ):– ಮಾನ್ಯ ಅಧ್ಯಕ್ಷರೆ, ಮಾನ್ಯ ಸದಸ್ಯರಾದ ಅಲಗೂರುರವರು ರಾಜ್ಯ ಮಹಿಳಾ ವಿಶ್ವವಿದ್ಯಾಲಯದಲ್ಲಿ ವಿಶ್ವವಿದ್ಯಾಲಯದ ಅಧಿನಿಯಮ 2000ರ ಪ್ರಕರಣ 56ರ ಅಡಿಯಲ್ಲಿ 1016 ಜನ ಬೋಧಕೇತರ ಸಿಬ್ಬಂದಿಯನ್ನು ನೇಮಿಸಿರುವ ಬಗ್ಗೆ ಮಾನ್ಯ ಸಚಿವರ ಗಮನ ಸೆಳೆದಿದ್ದಾರೆ. ಸರ್ಕಾರ ಇದರ ಬಗ್ಗೆ ಕ್ರಮ ತೆಗೆದುಕೊಳ್ಳುತ್ತದೆ.

3) ವಿಷಯ: ಗ್ರಾಮೀಣ ಪ್ರದೇಶಗಳಿಗೆ ಕುಡಿಯುವ ನೀರಿನ ತೊಂದರೆಯನ್ನು ನೀಗಿಸಲು ವಿಶೇಷ ಪ್ಯಾಕೇಜ್‌ಅನ್ನು ಘೋಷಿಸುವ ಬಗ್ಗೆ.

ಶ್ರೀ ಪಿಳ್ಳ ಮುನಿಶಾಮಪ್ಪ (ದೇವನಹಳ್ಳಿ):– ಮಾನ್ಯ ಅಧ್ಯಕ್ಷರೆ, ದೇವನಹಳ್ಳಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ದೇವನಹಳ್ಳಿ ಮತ್ತು ವಿಜಯಪುರ ಎರಡು ಪಟ್ಟಣಗಳಿವೆ. ಸುಮಾರು 46 ಜನ ಪುರಸಭಾ ಸದಸ್ಯರು ಬರುತ್ತಾರೆ. ಮತ್ತು ಗ್ರಾಮೀಣ ಪ್ರದೇಶದಲ್ಲಿ 306 ಹಳ್ಳಿಗಳು ಬರುತ್ತವೆ, 1995ರಲ್ಲಿ dark ಪ್ರದೇಶವೆಂದು ನಮಗೆ consider ಮಾಡಿದ ತದನಂತರದಲ್ಲಿ ನಮ್ಮ ತಾಲ್ಲೂಕಿನಲ್ಲಿ ಕುಡಿಯುವ ನೀರಿಗಾಗಿ ತೊಂದರೆಯಾಗುತ್ತಿದೆ. ಎರಡು ಪಟ್ಟಣ ಪ್ರದೇಶ ಮತ್ತು ಐದು ಹೋಬಳಿಗಳಿಗೆ ವಿಶೇಷವಾಗಿ ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಇರುವುದರಿಂದ ಈ ವ್ಯಾಪ್ತಿಯಲ್ಲಿ ಬರುವ ಪ್ರದೇಶಗಳಿಗೆ ಕುಡಿಯುವ ನೀರಿನ ತೊಂದರೆ ಇರುವುದರಿಂದ ಈ ಸಮಸ್ಯೆಯನ್ನು ನಿವಾರಿಸುವಂತಹ ವಿಶೇಷ

ಪ್ಯಾಕೇಜ್‌ಅನ್ನು ಮಾಡಿ ಕೊಡಬೇಕೆಂದು ಮಾನ್ಯ ಸಚಿವರಲ್ಲಿ ತಮ್ಮ ಮೂಲಕ ಕೇಳುವುದಕ್ಕೆ ಬಯಸುತ್ತೇನೆ.

ಶ್ರೀ ಟಿ.ಬಿ. ಜಯಚಂದ್ರ (ಮಾನ್ಯ ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು, ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಪರವಾಗಿ):– ಮಾನ್ಯ ಅಧ್ಯಕ್ಷರೆ, ಮಾನ್ಯ ಪಿಳ್ಳ ಮುನಿಶಾಮಪ್ಪನವರು ದೇವನಹಳ್ಳಿ ವಿಧಾನಸಭಾ ಕ್ಷೇತ್ರದಲ್ಲಿ ವಿಜಯಪುರ ಮತ್ತು ಪಟ್ಟಣ, ಗ್ರಾಮೀಣ ಪ್ರದೇಶಗಳಿಗೆ ಕುಡಿಯುವ ನೀರಿನ ತೊಂದರೆಯಾಗುತ್ತಿರುವ ಬಗ್ಗೆ ಸರ್ಕಾರದ ಗಮನವನ್ನು ಸೆಳೆದಿದ್ದಾರೆ. ಇದರ ಬಗ್ಗೆ ಸೂಕ್ತವಾದ ಕ್ರಮವನ್ನು ತೆಗೆದುಕೊಳ್ಳುತ್ತೇವೆ.

ಅಧ್ಯಕ್ಷರು:– ಸಿ.ಎನ್. ಬಾಲಕೃಷ್ಣ ಇಲ್ಲ. ಅಂಗಾರ.

4. ವಿಷಯ: ಸುಳ್ಯ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಕಾಣಿಯೂರು ಪ್ರಥಮ ದರ್ಜೆ ಕಾಲೇಜಿನ ಕಾಮಗಾರಿಯನ್ನು ಪ್ರಾರಂಭಿಸದೇ ಇರುವ ಬಗ್ಗೆ.

ಶ್ರೀ ಎಸ್. ಅಂಗಾರ (ಸುಳ್ಯ):– ಮಾನ್ಯ ಅಧ್ಯಕ್ಷರೆ, ಸುಳ್ಯ ವಿಧಾನಸಭಾ ಕ್ಷೇತ್ರಕ್ಕೆ ಸಂಬಂಧಪಟ್ಟ ಪುತ್ತೂರು ತಾಲ್ಲೂಕಿನ ಕಾಣಿಯೂರು ಗ್ರಾಮದ ಕಾಣೇರಿಗೆ 2009ರಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಮಂಜೂರಾಗಿದೆ. ಆದರೆ 2013–14ನೇ ಸಾಲಿಗೆ ಅಲ್ಲಿ ನೋಡಲ್ ಕಾಲೇಜು ಯೋಜನೆ ಅಡಿಯಲ್ಲಿ ಸುಮಾರು 12 ಕೋಟಿ ರೂಪಾಯಿ ಅನುದಾನ ಬಿಡುಗಡೆ ಆಗಿದೆ. ಕಾಣಿಯೂರು ಗ್ರಾಮದಲ್ಲಿ ಸರ್ಕಾರಿ ಜಾಗ ಲಭ್ಯವಿಲ್ಲದ ಕಾರಣ ಅಲ್ಲಿ ಕಾಲೇಜು ಕಟ್ಟಡ ನಿರ್ಮಾಣ ಮಾಡುವುದಕ್ಕೆ ಅಸಾಧ್ಯವಾಗಿದೆ. ಆದರೆ ಕಾಲೇಜು ಅಭಿವೃದ್ಧಿ ಸಮಿತಿ ಮತ್ತು ವಿವಿಧ ಸಂಘಟನೆಗಳ ಸಭೆ ನಡೆಸಿ ಅಲ್ಲಿ ತೀರ್ಮಾನ ಮಾಡಿಕೊಂಡು ಬೆಳ್ಳಂದೂರು ಗ್ರಾಮದ ಸರ್ವೇ ನಂ. 99 ರಲ್ಲಿ ಸುಮಾರು 38 ಎಕರೆ ಸರ್ಕಾರಿ ಜಾಗ ಇದೆ. ಆ ಜಾಗ ಸೂಕ್ತವೆಂದು ನಾವೆಲ್ಲರೂ ತೀರ್ಮಾನ ಮಾಡಿ ಸಂಬಂಧಪಟ್ಟ ಇಲಾಖೆಗೆ